ಕರ್ನಾಟಕ ಸರ್ಕಾರ
# ಕರ್ನಾಟಕ ಪರೀಕ್ಷಾ ಪ್ರಾಧಿಕಾರ
ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–560012. ದೂರವಾಣಿ: 080–23460460 (5 ಲೈನ್ಸ್),
ಫ್ಯಾಕ್ಸ್: 080–23461576 ಇ–ಮೇಲ್: keauthority-ka@nic.in ವೆಬ್‌ಸೈಟ್: http://kea.nic.in

**ಸಂಖ್ಯೆ: ಇಡಿ/ಕೆಇಎ/ಆಡಳಿತ/ಸಿ.ಆರ್–08/2023–24** **ದಿನಾಂಕ: 04–08–2023**

## ಎಂಬಿಎ / ಎಂಸಿಎ /ಎಂಇ /ಎಂ.ಟೆಕ್ /ಎಂ.ಆರ್ಕಿಟೆಕ್ಚರ್ ಕೋರ್ಸುಗಳ ಮೊದಲನೆ ವರ್ಷದ / 1ನೇ ಸೆಮಿಸ್ಟರ್‌ಗಳ ಪ್ರವೇಶಕ್ಕೆ ಸ್ನಾತಕೋತ್ತರ ಸಾಮಾನ್ಯ ಪ್ರವೇಶ ಪರೀಕ್ಷೆ–2023

1) ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ. ಇಡಿ 17 ಟಿಇಸಿ 2018 ಬೆಂಗಳೂರು, ದಿನಾಂಕ 13–03–2018 ರ ಅನ್ವಯ ಅರ್ಹ ಕರ್ನಾಟಕ ಮತ್ತು ಕರ್ನಾಟೇಕತರ ಅಭ್ಯರ್ಥಿಗಳಿಂದ 2023–24 ನೇ ಸಾಲಿನ ಮೊದಲನೆ ವರ್ಷದ / 1ನೇ ಸೆಮಿಸ್ಟರ್‌ಗಳ (ಪೂರ್ಣಾವಧಿ / ಅರೆಕಾಲಿಕ) ಎಂಬಿಎ / ಎಂಸಿಎ / ಎಂಇ / ಎಂ.ಟೆಕ್ / ಎಂ.ಆರ್ಕಿಟೆಕ್ಚರ್ ಕೋರ್ಸುಗಳ ಪ್ರವೇಶಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ನಡೆಸುವ ಸ್ನಾತಕೋತ್ತರ ಸಾಮಾನ್ಯ ಪವೇಶ ಪರೀಕ್ಷೆ – 2023 ಕ್ಕೆ ಹಾಜರಾಗುವರು ಈ ಮೇಲಿನ ಕೋರ್ಸ್‌ಗಳಿಗೆ ಪ್ರವೇಶ ಪಡೆಯಲು Karnataka Selection of Candidates for Admission to Master of Business Administration and Master of Computer Application Courses Rules, 2005, Karnataka Selection of Candidates for Admission to Master of Engineering (ME) and Master of Technology (M.Tech) courses, Rules, 2005 ರ ಅನ್ವಯ ಅರ್ಹರಾಗಿರುತ್ತಾರೆ.

2) **ಇಂಜಿನಿಯರಿಂಗ್ ಹಾಗೂ ಟೆಕ್ನಾಲಜಿ ವಿಭಾಗದ GATE ಅರ್ಹ ಅಭ್ಯರ್ಥಿಗಳು ಮಾತ್ರ ವಿಟಿಯು, ಬೆಳಗಾವಿ ಅಡಿಯಲ್ಲಿನ ವಿವಿಧ ಎಂ.ಟೆಕ್ ಕೋರ್ಸುಗಳಿಗೆ ಪ್ರವೇಶ ಪಡೆಯಲು ಅರ್ಹರಾಗುತ್ತಾರೆ.** ಗೇಟ್ ಪರೀಕ್ಷೆಯಲ್ಲಿ ಮಾನ್ಯತೆ ಅಂಕಗಳನ್ನು ಹೊಂದಿರುವವರು (Valid GATE Score) ಎಂಇ / ಎಂ.ಟೆಕ್ / ಎಂ. ಆರ್ಕ್ ಕೋರ್ಸ್‌ಗಳ ಪ್ರವೇಶಕ್ಕಾಗಿ, **ಪಿಜಿಸಿಇಟಿ–2023 ಕ್ಕೆ** ಹಾಜರಾಗಬೇಕಾಗಿರುವುದಿಲ್ಲ, ಆದರೆ ಅಂತಹ ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿಗಳನ್ನು ಭರ್ತಿ ಮಾಡಿ ಶುಲ್ಕವನ್ನು ಪಾವತಿಸಿ ಪ್ರವೇಶಕ್ಕೆ ಅರ್ಹರಾಗಬಹುದು. SC / ST / OBC ಅರ್ಹತಾ ಮಾನದಂಡಗಳು ಕರ್ನಾಟಕ SC / ST / OBC ಅಭ್ಯರ್ಥಿಗಳಿಗೆ ಮಾತ್ರ ಅನ್ವಯಿಸುತ್ತದೆ.

3) ಕರ್ನಾಟಕೇತರ ಅಭ್ಯರ್ಥಿಗಳು ಎಂಬಿಎ ಮತ್ತು ಎಂಸಿಎ ಪ್ರವೇಶಕ್ಕೆ ಆಡಳಿತ ಮಂಡಳಿಯವರು ಸರ್ಕಾರಕ್ಕೆ ಬಿಟ್ಟುಕೊಡುವ ಸೀಟುಗಳನ್ನು ಮಾತ್ರ ಆಯ್ಕೆಗೆ ಪರಿಗಣಿಸಲಾಗುವುದು. ಕರ್ನಾಟಕೇತರ ಅಭ್ಯರ್ಥಿಗಳಿಗೆ ಯಾವುದೇ ಮೀಸಲಾತಿಯ ಸವಲತ್ತುಗಳು ಅನ್ವಯಿಸುವುದಿಲ್ಲ. ಆದ್ದರಿಂದ ಸಾಮಾನ್ಯ ವರ್ಗಕ್ಕೆ ನಿಗದಿಪಡಿಸಿರುವ ಕನಿಷ್ಠ ಅಂಕಗಳನ್ನು ಪಡೆದಿದ್ದಲ್ಲಿ ಮಾತ್ರ (50%) ಅರ್ಹತೆಯನ್ನು ಪಡೆಯಬಹುದಾಗಿದೆ ಹಾಗೂ ಪ್ರವೇಶಕ್ಕಾಗಿ ನೋಂದಣಿಯನ್ನು ಮಾಡಿಕೊಳ್ಳಬಹುದಾಗಿದೆ. SC / ST / OBC ಅರ್ಹತಾ ಮಾನದಂಡಗಳು ಕರ್ನಾಟಕದ SC / ST / OBC ಅಭ್ಯರ್ಥಿಗಳಿಗೆ ಮಾತ್ರ ಅನ್ವಯಿಸುತ್ತದೆ.

4) ಅರ್ಹತಾ ಪರೀಕ್ಷೆಯಲ್ಲಿ ಅಭ್ಯರ್ಥಿಗಳು ಒಟ್ಟು ಕನಿಷ್ಠ ಶೇ. 50%, ಹಾಗೂ ಕರ್ನಾಟಕದ ಎಸ್.ಸಿ., ಎಸ್.ಟಿ., ಪ್ರವರ್ಗ–1 ರ ಅಭ್ಯರ್ಥಿಗಳು ಕನಿಷ್ಠ ಶೇ. 45% ಅಂಕಗಳನ್ನು ಪಡೆದಿರಬೇಕು. CGPA / SGPA ಗ್ರೇಡ್‌ಗಳ ಮಾದರಿಯಲ್ಲಿ ನಿಗದಿಪಡಿಸಿರುವ ಅರ್ಹತಾ ಪರೀಕ್ಷೆಯ ಅಂಕಗಳು, ಅಗತ್ಯವಿರುವ ಕನಿಷ್ಠ ಅರ್ಹತಾ ಅಂಕಗಳನ್ನು ಅಥವಾ ಅದಕ್ಕಿಂತ ಹೆಚ್ಚು ಅಂಕಗಳನ್ನು ಗ್ರೇಡ್‌ಗಳ ಅಂಕಗಳು ಸೂಚಿಸುತ್ತಿರುವ ಬಗ್ಗೆ ಖಾತರಿ ಪಡಿಸಿಕೊಳ್ಳಿ.

5) **ಪಿಜಿಸಿಇಟಿ–2023 ರ ವೇಳಾಪಟ್ಟಿ**

| ದಿನಾಂಕ / ದಿನ | ಕೋರ್ಸುಗಳು | ಪ್ರವೇಶ | ಸಮಯ | ಅಂಕಗಳು |
|---|---|---|---|---|
| **09-09-2023** ಶನಿವಾರ | **M.E. / M. Tech / M. Arch** | **Type-A: Courses Offered by VTU, UVCE, UBDTCE.** | **2.30 PM to 4.30 PM** | **100** |
| **10-09-2023** ಭಾನುವಾರ | **MCA** | **Admission to 1st Year / 1st Semester** | **10.30 AM to 12.30 PM** | **100** |
| | **MBA** | **Admission to 1st Year / 1st Semester** | **2.30 PM to 4.30 PM** | **100** |

6) **ಆಸಕ್ತ ಅಭ್ಯರ್ಥಿಗಳು ಪಿಜಿಸಿಇಟಿ–2023ಕ್ಕೆ ದಿನಾಂಕ: 07–08–2023 ರ ಬೆಳಿಗ್ಗೆ 11.00 ರಿಂದ ದಿನಾಂಕ: 17–08–2023 ರ ರಾತ್ರಿ 11.59 ರೊಳಗಾಗಿ ಆನ್‌ಲೈನ್ ಮೂಲಕ ನೋಂದಣಿ ಮಾಡಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿರುತ್ತದೆ. ದಿನಾಂಕ: 19–08–2023 ರ ಸಂಜೆ 6.00 ರೊಳಗೆ ಶುಲ್ಕವನ್ನು ಪಾವತಿಸಬಹುದಾಗಿರುತ್ತದೆ.**

7) **ಶೈಕ್ಷಣಿಕ ವಿದ್ಯಾರ್ಹತೆ, ದಾಖಲಾತಿ ಪರಿಶೀಲನೆಗೆ ಸಲ್ಲಿಸಬೇಕಾದ ಮೂಲ ದಾಖಲಾತಿಗಳು ಹಾಗೂ ವಿವರವಾದ ಅರ್ಹತಾ ಮಾನದಂಡಗಳನ್ನೊಳಗೊಂಡ ಮಾಹಿತಿ ಪುಸ್ತಕ 2023 ಅನ್ನು ಪ್ರಾಧಿಕಾರದ ವೆಬ್‌ಸೈಟಿನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗಿರುತ್ತದೆ.** ಅಭ್ಯರ್ಥಿಗಳು ಯಾವುದೇ ಕೋರ್ಸಿಗೆ ಅರ್ಜಿ ಸಲ್ಲಿಸುವ ಮೊದಲು ಅರ್ಹತಾ ವಿವರವನ್ನು ಪರಿಶೀಲಿಸಲು ಸೂಚಿಸಿದೆ.

8) ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಪಿಜಿಸಿಇಟಿ – 2023 ಕ್ಕೆ ದಾಖಲಿಸಿದ ಎಲ್ಲಾ ಮಾಹಿತಿಗಳನ್ನು ಅಂತಿಮ ಎಂದು ಪರಿಗಣಿಸಲಾಗುತ್ತದೆ ಮತ್ತು ಈ ಮಾಹಿತಿಯೇ ಮುಂದಿನ ಎಲ್ಲಾ ಪ್ರಕ್ರಿಯೆಗಳಿಗೆ ಆಧಾರವಾಗಿರುತ್ತದೆ, ಹಾಗೂ ಯಾವುದೇ ಕಾರಣಕ್ಕೂ ದಾಖಲಿಸಿದ ಮಾಹಿತಿಯನ್ನು ಬದಲಾಯಿಸಲು ಅವಕಾಶವಿರುವುದಿಲ್ಲ.

**ಗಮನಿಸಿ:**

1. All the admissions and undergraduate Degrees to claim eligibility for admission to any of the PG courses are subject to approval of the Government / VTU / other respective University.
2. As per the letter from VTU, Belgaum dated 12-08-2014, to pursue M.Tech course on the basis of undergraduate programme from Aeronautical Society of India is NOT approved.
3. As per the letter from VTU, Belgaum dated 30-05-2014, who have acquired B.E. Degree through Distance Education Mode are NOT eligible for admission to M.Tech Courses.
4. Candidates who have passed the qualifying examination from Aeronautical Society of India and Associate Membership Examination of Institution of Electronics and Telecommunication (AMIET) will not be permitted seek admission to M.Tech as per VTU, Belgaum letter dated 14-05-2018.

ಹೆಚ್ಚಿನ ನಿಯಮಾವಳಿಗಳು, ಅರ್ಹತೆ ಇತ್ಯಾದಿಗಳಿಗಾಗಿ ಕೆಇಎ ವೆಬ್‌ಸೈಟ್ **http://kea.kar.nic.in** ಗೆ ಭೇಟಿ ನೀಡಿ.

ಸಹಿ/–
(ಎಸ್. ರಮ್ಯ, ಭಾ.ಆ.ಸೇ)
**ಕಾರ್ಯನಿರ್ವಾಹಕ ನಿರ್ದೇಶಕರು**

ವಾಸಾಸಂಇ/ವಾ.ಪ್ರ/779/2023–24

Size: 12x28cm